**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ರಾಜ್ಯ ಸರ್ಕಾರಿ ನೌಕರರ ಅವಲಂಬಿತ ವಿಶೇಷ ಚೇತನ (ಅಂಧ ಮತ್ತು ಅಂಗವಿಕಲ) ಮಕ್ಕಳಿಗೆ ನೀಡುತ್ತಿರುವ ಶೈಕ್ಷಣಿಕ ಭತ್ಯೆಯನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:** 1. ದಿನಾಂಕ 10.06.2013ರ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 12 ಎಸ್‌ಆರ್‌ಪಿ 2012(XIII)
2. ದಿನಾಂಕ 19.01.2016ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 1 ಎಸ್‌ಆರ್‌ಪಿ 2016

**ಪ್ರಸ್ತಾವನೆ:**

2011ರ ಅಧಿಕಾರಿ ವೇತನ ಸಮಿತಿಯ ಶಿಫಾರಸ್ಸಿನಂತೆ, 1ನೇ ತರಗತಿಯಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ರಾಜ್ಯ ಸರ್ಕಾರಿ ನೌಕರರ ವಿಶೇಷ ಚೇತನ (ಅಂಧ/ಅಂಗವೈಕಲ್ಯತೆ) ಹೊಂದಿರುವ ಮಕ್ಕಳಿಗೆ ಮೇಲೆ ಓದಲಾದ ದಿನಾಂಕ 10.06.2013ರ ಸರ್ಕಾರಿ ಆದೇಶದಲ್ಲಿನ ಷರತ್ತು ಮತ್ತು ನಿಬಂಧನೆಗಳ ಪೂರೈಕೆಗೊಳಪಟ್ಟು ಗರಿಷ್ಠ 2 ಮಕ್ಕಳ ಮಿತಿಗೊಳಪಟ್ಟು ಪ್ರತಿ ಮಗುವಿಗೆ ಮಾಹೆಯಾನ ರೂ.500ಗಳ ಶೈಕ್ಷಣಿಕ ಭತ್ಯೆಯನ್ನು ಮಂಜೂರು ಮಾಡಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ವಿಶೇಷ ಚೇತನ ಮಕ್ಕಳ ಶೈಕ್ಷಣಿಕ ಭತ್ಯೆಯನ್ನು ಮಂಜೂರು ಮಾಡುವ ಸರ್ಕಾರದ ನೀತಿಯನ್ನು ಪರಿಶೀಲಿಸಿದ 6ನೇ ರಾಜ್ಯ ವೇತನ ಆಯೋಗವು ಈ ಶೈಕ್ಷಣಿಕ ಭತ್ಯೆಯನ್ನು ಪರಿಷ್ಕರಿಸಲು ಶಿಫಾರಸ್ಸು ಮಾಡಿರುತ್ತದೆ.

6ನೇ ರಾಜ್ಯ ವೇತನ ಆಯೋಗದ ಈ ಶಿಫಾರಸ್ಸನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 24 ಎಸ್‌ಆರ್‌ಪಿ 2018(IX)**
**ಬೆಂಗಳೂರು, ದಿನಾಂಕ 11ನೇ ಜನವರಿ 2019**

ರಾಜ್ಯ ಸರ್ಕಾರಿ ನೌಕರರ ವಿಶೇಷ ಚೇತನ ಮಕ್ಕಳಿಗೆ ನೀಡಲಾಗುತ್ತಿರುವ ಮಾಸಿಕ ರೂ.500ಗಳ ಶೈಕ್ಷಣಿಕ ಭತ್ಯೆಯನ್ನು ಅವರು ಹದಿನೆಂಟು ವರ್ಷಗಳ ವಯೋಮಿತಿಯನ್ನು ಪೂರ್ಣಗೊಳಿಸುವ ಅಥವಾ 12ನೇ ತರಗತಿ ವ್ಯಾಸಂಗ ಪೂರ್ಣಗೊಳಿಸುವವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ, ಗರಿಷ್ಠ ಎರಡು ಮಕ್ಕಳ ಮಿತಿಗೊಳಪಟ್ಟು, ಪ್ರತಿ ಮಗುವಿಗೆ **1ನೇ ಜನವರಿ 2019** ರಿಂದ ಜಾರಿಗೆ ಬರುವಂತೆ ಮಾಸಿಕ ರೂ.1000ಗಳಿಗೆ ಪರಿಷ್ಕರಿಸಿ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳ ಪೂರೈಕೆಗೊಳಪಟ್ಟು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

i) ಈ ಸೌಲಭ್ಯದ ಉದ್ದೇಶಕ್ಕಾಗಿ ವಿಶೇಷ ಚೇತನ/ವಿಕಲ ಚೇತನ/ಅಂಗವಿಕಲತೆಯನ್ನು The Rights of Persons with Disabilities Act, 2016 ರ ಅನುಬಂಧದಲ್ಲಿ ವಿಶದಪಡಿಸಿದಂತೆ ಅರ್ಥೈಸಿಕೊಳ್ಳತಕ್ಕದ್ದು.

...2

Kiran Raghupathi

ii) The Rights of Persons with Disabilities Act, 2016 ರ ಅನುಬಂಧದ ಉದ್ಧೃತ ಭಾಗವು ಈ ಆದೇಶದ ಅನುಬಂಧದಲ್ಲಿ ತೋರಿಸಿದಂತೆ ಇರುತ್ತದೆ.

iii) ಈ ಮೇಲಿನ 2016ರ ಅಧಿನಿಯಮದ ಅರ್ಥ ವಿವರಣೆಯ ವ್ಯಾಪ್ತಿಯಲ್ಲಿ ಬರುವ ವಿಶೇಷ ಚೇತನ/ಅಂಗವಿಕಲ ಮಕ್ಕಳಿಗೆ ಮಾತ್ರ ಈ ಸೌಲಭ್ಯವು ಲಭ್ಯವಾಗತಕ್ಕದ್ದು.

iv) ಈ ಸೌಲಭ್ಯವನ್ನು ಸರ್ಕಾರಿ ನೌಕರನು ಅವನ ಸೇವಾವಧಿಯಲ್ಲಿ ಮಾತ್ರ ಪಡೆಯಲು ಅರ್ಹನಾಗಿರುತ್ತಾನೆ.

v) ವಿಶೇಷ ಚೇತನ ಮಕ್ಕಳ ಅಂಧತ್ವ ಮತ್ತು ಅಂಗವೈಕಲ್ಯತೆಯ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರವನ್ನು ಸಂಬಂಧಿಸಿದ ಶಾಲೆಗಳ/ಶಿಕ್ಷಣ ಸಂಸ್ಥೆಗಳ ಮುಖ್ಯೋಪಾಧ್ಯಾಯರು / ಪ್ರಾಂಶುಪಾಲರ ಶಿಫಾರಸ್ಸಿನೊಂದಿಗೆ ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

vi) ವಿಶೇಷ ಚೇತನ ಮಕ್ಕಳು ಸರ್ಕಾರಿ ನೌಕರರ ಮಕ್ಕಳಾಗಿರುವ ಬಗ್ಗೆ ದಾಖಲೆಯನ್ನು ಅಥವಾ ಈ ಮಕ್ಕಳು ಅವರ ಮೇಲೆ ಸಂಪೂರ್ಣ ಅವಲಂಬಿತರಾಗಿರುವ ಬಗ್ಗೆ ಘೋಷಣಾ ಪತ್ರವನ್ನು/ ದಾಖಲೆಯನ್ನು ಸಂಬಂಧಿಸಿದ ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸತಕ್ಕದ್ದು.

vii) ಈ ಸೌಲಭ್ಯವು ಸರ್ಕಾರಿ ನೌಕರನು ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರವನ್ನು ಇಲಾಖಾ ಮುಖ್ಯಸ್ಥರಿಗೆ ಸಲ್ಲಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಲಭ್ಯವಾಗುತ್ತದೆ.

viii) ವಿಶೇಷ ಚೇತನ ಮಕ್ಕಳ ತಂದೆ/ತಾಯಿ/ಪೋಷಕರಲ್ಲಿ ಒಬ್ಬರು ಕೇಂದ್ರ ಅಥವಾ ರಾಜ್ಯ ಸರ್ಕಾರ ಅಥವಾ ಇಬ್ಬರೂ ರಾಜ್ಯ ಸರ್ಕಾರಿ ನೌಕರರಾಗಿದ್ದಲ್ಲಿ, ಈ ಭತ್ಯೆಯನ್ನು ಒಬ್ಬರು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ. ಈ ಕುರಿತು ಸೂಕ್ತ ಮುಚ್ಚಳಿಕೆಯನ್ನು ಸಂಬಂಧಿಸಿದ ನೌಕರರಿಂದ ಪಡೆಯತಕ್ಕದ್ದಾಗಿರುತ್ತದೆ.

ix) ಸರ್ಕಾರಿ ನೌಕರನ ಮಕ್ಕಳು/ಅವಲಂಬಿತ ಮಕ್ಕಳು ಕೇಂದ್ರ ಅಥವಾ ರಾಜ್ಯ ಸರ್ಕಾರದಿಂದ ವಿಶೇಷ ಭತ್ಯೆ/ಧನ ಸಹಾಯ ಇತ್ಯಾದಿ ಸೌಲಭ್ಯಗಳನ್ನು ಪಡೆಯುತ್ತಿರುವ ಪ್ರಕರಣಗಳಲ್ಲಿ ಈ ಸೌಲಭ್ಯವನ್ನು ಮಂಜೂರು ಮಾಡಲು ಬರುವುದಿಲ್ಲ.

x) ಈ ಮೇಲಿನ ಷರತ್ತುಗಳು ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮಂಜೂರು ಮಾಡುವ ಪ್ರಕರಣಗಳಿಗೆ ಮಾತ್ರ ಅನ್ವಯಿಸತಕ್ಕದ್ದಾಗಿರುತ್ತದೆ. ಈ ಮೊದಲು ಮಂಜೂರು ಮಾಡಲಾದ ಶೈಕ್ಷಣಿಕ ಭತ್ಯೆಯ ಪ್ರಕರಣಗಳಿಗೆ ಇದನ್ನು ಪುನ: ಅನ್ವಯಿಸುವ ಪ್ರಮೇಯತೆ ಇರುವುದಿಲ್ಲ.

..3

Kiran Raghupathi

2. ಈ ಆದೇಶದನ್ವಯ ಲಭ್ಯವಿರುವ ಶೈಕ್ಷಣಿಕ ಭತ್ಯೆಯನ್ನು ಮಂಜೂರು ಮಾಡಲು ಸಂಬಂಧಿಸಿದ ಇಲಾಖಾ ಮುಖ್ಯಸ್ಥರು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ.

3. ಶೈಕ್ಷಣಿಕ ಭತ್ಯೆ ಮಂಜೂರಾತಿ ಸಂಬಂಧ ಈ ಮೊದಲು ಹೊರಡಿಸಿದ ಆದೇಶಗಳನ್ನು ರದ್ದುಪಡಿಸಿ ಈ ಆದೇಶವನ್ನು ಹೊರಡಿಸಲಾಗಿರುತ್ತದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಡಿ.ಎಸ್.ಜೋಗೋಜಿ)**
**ಸರ್ಕಾರದ ಉಪ ಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು–2)**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿಕಟ್ಟಡ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
17. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
18. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
19. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
20. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
21. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A',ಬಹುಮಹಡಿಗಳ ಕಟ್ಟಡ, ಬೆಂಗಳೂರು.
22. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
25. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
26. ವಾರಪತ್ರ /ಶಾಖೆಯ ರಕ್ಷಾಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.kar.nic.in** ವೀಕ್ಷಿಸಿ.

Kiran Raghupathi